# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

12

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 12/10/20

# ಕೃಷಿ ಕಾಯ್ದೆಗೆ ಇಸ್ರೇಲ್ ಮೆಚ್ಚುಗೆ

**ಹೊಸದಿಲ್ಲಿ:** ಭಾರತದಲ್ಲಿ ಇತ್ತೀಚೆಗೆ ಜಾರಿಗೊಳಿಸಲಾದ ನೂತನ ಕೃಷಿ ಕಾಯಿದೆಗಳಿಂದ ರೈತರಿಗೆ ಭಾರಿ ಅನುಕೂಲವಾಗಲಿದ್ದು, ಕೃಷಿಕರ ಬಲ ವರ್ಧನೆಗೆ ನೆರವಾಗಲಿವೆ ಎಂದು ಭಾರತದಲ್ಲಿರುವ ಇಸ್ರೇಲ್ ರಾಯಭಾರಿ ರೊನ್ ಮಲ್ಕಾ ಹೇಳಿದ್ದಾರೆ.

ಈ ಕಾಯಿದೆಗಳಿಂದ ರೈತರಿಗೆ ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡಲು ಹೆಚ್ಚಿನ ಆಯ್ಕೆಗಳು ದೊರೆಯಲಿದ್ದು, ಗರಿಷ್ಠ ಲಾಭ ಪಡೆಯಲು ಅವಕಾಶವಿದೆ. ಒಮ್ಮೆ ಈ ಸುಧಾರಣಾ ಕಾಯಿದೆಗಳ ಕುರಿತ ವಿವಾದ ತಣ್ಣಗಾದರೆ, ರೈತರಿಗೆ ಇವುಗಳ ನೈಜ ಅನುಕೂಲಗಳು ಮನದಟ್ಟಾಗಲಿವೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಕೃಷಿ ಕ್ಷೇತ್ರದಲ್ಲಿನ ಸಹಕಾರವು ಭಾರತ ಮತ್ತು ಇಸ್ರೇಲ್ ಸಂಬಂಧವನ್ನು ಗಟ್ಟಿಗೊಳಿಸಿದೆ. ಹೊಸ ಕೃಷಿಸುಧಾರಣಾ ಕಾಯಿದೆಗಳು ಈ ಸಂಬಂಧವನ್ನು ಮತ್ತಷ್ಟು ವೃದ್ಧಿಗೊಳಿಸಲು ನೆರವಾಗಲಿವೆ. ರೈತರನ್ನು ಗ್ರಾಹಕರೊಂದಿಗೆ ನೇರವಾಗಿ ಸಂಪರ್ಕಿಸಲು ಡಿಜಿಟಲ್ ವೇದಿಕೆಗಳನ್ನು ಬಳಸಿಕೊಳ್ಳುವ ಮೂಲಕ ಇಸ್ರೇಲ್‌ನ ತಂತ್ರಜ್ಞಾನವನ್ನು ಭಾರತ ಬಳಸಿಕೊಳ್ಳಬಹುದಾಗಿದೆ ಎಂದು ಸಲಹೆ ನೀಡಿದ್ದಾರೆ.

''ಇಸ್ರೇಲ್‌ನಲ್ಲಿ ಮಧ್ಯವರ್ತಿಗಳ ಹಾವಳಿಯಿಲ್ಲ. ಅಲ್ಲಿ ಸಂಪೂರ್ಣ ಪಾರದರ್ಶಕತೆಯಿದೆ. ರೈತರು ನೇರವಾಗಿ ಗ್ರಾಹಕರೊಂದಿಗೆ ಸಂಪರ್ಕ ಹೊಂದಿರುತ್ತಾರೆ. ಡಿಜಿಟಲ್ ತಂತ್ರಜ್ಞಾನದಿಂದ ಈ ವ್ಯವಸ್ಥೆಯು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿದೆ,'' ಎಂದಿದ್ದಾರೆ.

## ಮಧ್ಯವರ್ತಿಗಳ ಬೆಂಬಲಿಗರಿಂದಲೇ ಹೋರಾಟ

**ಹೊಸದಿಲ್ಲಿ:** ನೂತನ ಕೃಷಿ ಕಾಯಿದೆಗಳನ್ನು ವಿರೋಧಿಸುತ್ತಿರುವ ಪ್ರತಿಪಕ್ಷಗಳ ವಿರುದ್ಧ ಹರಿಹಾಯ್ದಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಕೃಷಿ ವಲಯದ ಸುಧಾರಣಾ ಕ್ರಮಗಳಿಂದ ದೇಶವು ಯಾವುದೇ ಕಾರಣಕ್ಕೂ ಹಿಂದೆ ಸರಿಯುವುದಿಲ್ಲ ಎಂದಿದ್ದಾರೆ.

''ದಲ್ಲಾಳಿಗಳು ಮತ್ತು ಮಧ್ಯವರ್ತಿಗಳ ಬೆಂಬಲದಿಂದಲೇ ರಾಜಕಾರಣ ಮಾಡುತ್ತಿರುವವರು ಮಾತ್ರವೇ ಕಾಯಿದೆಗಳ ಕುರಿತಾಗಿ ಸುಳ್ಳು ಸುದ್ದಿ ಹಬ್ಬಿಸುತ್ತಿದ್ದಾರೆ,'' ಎಂದು ಅವರು ಟೀಕಿಸಿದ್ದಾರೆ. 'ಸ್ವಾಮಿತ್ವ' ಯೋಜನೆಯಡಿ ಆಸ್ತಿ ಹಕ್ಕು ಕಾರ್ಡ್‌ಗಳ ವಿತರಣೆಗೆ ಚಾಲನೆ ನೀಡಿ ಮಾತನಾಡಿದ ಅವರು, ''ಈ ಸರಕಾರ ತಂದಿರುವ ಸುಧಾರಣಾ ಕ್ರಮಗಳನ್ನು ವಿರೋಧಿಸುತ್ತಿರುವವರನ್ನು ಕೃಷಿಕರು ಬೆಂಬಲಿಸುವುದಿಲ್ಲ,'' ಎಂದರು.

''ಹಿಂದಿನ ಸರಕಾರಗಳು ಕಳೆದ ಆರು ದಶಕಗಳಲ್ಲಿ ಮಾಡದ ಕೆಲಸವನ್ನು ಕಳೆದ ಆರು ವರ್ಷಗಳಲ್ಲಿ ಕೇಂದ್ರದ ಬಿಜೆಪಿ ಸರಕಾರ ಗ್ರಾಮಗಳು, ಗ್ರಾಮೀಣ ಜನರಿಗಾಗಿ ಮಾಡಿದೆ. ಈ ಮೊದಲು ದೇಶದಲ್ಲಿ ಆಡಳಿತ ನಡೆಸಿದವರು ಗ್ರಾಮೀಣ ಭಾರತವನ್ನು ಮರೆತಿದ್ದರು. ಹೆಚ್ಚಿನ ಜನರಿಗೆ ಗ್ರಾಮಗಳು, ಬಡವರು, ಕೃಷಿಕರು, ಕಾರ್ಮಿಕರು ಆತ್ಮ



ಕೃಷಿ ಕಾಯಿಗೆಗಳನ್ನು ಬೆಂಬಲಿಸಿ ಬಿಜೆಪಿ ಕಾರ್ಯಕರ್ತರು ಹೊಸದಿಲ್ಲಿಯಲ್ಲಿ ಭಾನುವಾರ ಟ್ರ್ಯಾಕ್ಟರ್ ರ್‍ಯಾಲಿ ನಡೆಸಿದರು.

ನಿರ್ಭರರಾಗುವುದು ಬೇಕಾಗಿಲ್ಲ. ನಮ್ಮ ಸರಕಾರ ಅವರನ್ನು ಸಬಲೀಕರಣಗೊಳಿಸಲು ಮುಂದಾಗಿದೆ. ಕೃಷಿಕರು ಸೇರಿದಂತೆ ಎಲ್ಲಾ ಫಲಾನುಭವಿಗಳಿಗೆ ನಗದು ನೇರ ವರ್ಗಾವಣೆಯಂತಹ ಯೋಜನೆ ಜಾರಿಗೊಳಿಸಿರುವುದರಿಂದ ಕೆಲವು ಮಧ್ಯವರ್ತಿಗಳ ಅಕ್ರಮ ಸಂಪಾದನೆಗೆ ಹೊಡೆತ ಬಿದ್ದಿದೆ,'' ಎಂದು ಪರೋಕ್ಷವಾಗಿ ಕಾಂಗ್ರೆಸ್ ಅನ್ನು ಟೀಕಿಸಿದರು.